ವಿಷಯ:- ಹಾವೇರಿ ಸಹಕಾರಿ ಸಕ್ಕರೆ ಕಾರ್ಖಾನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 170 (154)

ಶ್ರೀ ಯು.ಬಿ.ಬಣಕಾರ್ (ಹಿರೇಕೆರೂರು):- ಮಾನ್ಯ ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) 1994-95ನೇ ಕಬ್ಬಿನ ಹಂಗಾಮಿನಲ್ಲಿ ಹಾವೇರಿ ಸಹಕಾರಿ ಸಕ್ಕರೆ ಕಾರ್ಖಾನೆಯ ರೈತರು ಕೊಲ್ಲಾಪುರಕ್ಕೆ ಕಬ್ಬನ್ನು ಸಾಗಾಣಿಕೆ ಮಾಡಿದ್ದು ಇದುವರೆಗೆ ಕಬ್ಬು ಕಳಿಸಿದ ರೈತರಿಗೆ ಹಣ ಸಂದಾಯವಾಗದೇ ಇರುವುದು ಸರಕಾರದ ಗಮನಕ್ಕೆ ಬಂದಿದೆಯಾ?

ಆ) ಹಾಗಿದ್ದಲ್ಲಿ ಕೊಲ್ಲಾಪುರದ ಕಾರ್ಖಾನೆಯಿಂದ ಹಣ ಪಾವತಿ ಆಗಬೇಕಾದ ಮೊತ್ತವೆಷ್ಟು?

ಇ) ಹಾಗಿದ್ದಲ್ಲಿ ಹಣ ಪಾವತಿಸಲು ಕ್ರಮ ತೆಗೆದುಕೊಳ್ಳಲಾಗುವುದೇ?

ಶ್ರೀ ಉಮೇಶ್ ವಿ.ಕತ್ತಿ (ಸಕ್ಕರೆ ಸಚಿವರು):-

ಅ) 1994-95ನೇ ಸಾಲಿನಲ್ಲಿ ಹಾವೇರಿ ಸಹಕಾರಿ ಸಕ್ಕರೆ ಕಾರ್ಖಾನೆಯ ವ್ಯಾಪ್ತಿಯ ರೈತರು ಕೊಲ್ಲಾಪುರಕ್ಕೆ ಕಬ್ಬನ್ನು ಸಾಗಾಣಿಕೆ ಮಾಡಿದ್ದು, ಸರ್ಕಾರದ ಗಮನಕ್ಕೆ ಬಂದಿದೆ. ಆದರೆ, ಹಣ ಸಂದಾಯ ಮಾಡದೆ ಇರುವ ವಿಚಾರ ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ವಿಷಯ:- ಗಂಗಾ ಕಲ್ಯಾಣ ಯೋಜನೆಗೆ ಸಂಬಂಧಿಸಿದ ವಿಷಯ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 171 (17)

ಶ್ರೀ ಬಸವನಗೌಡ ರಾ.ಪಾಟೀಲ್ (ಬಿಜಾಪುರ):- ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) 1995-96ರಲ್ಲಿ ವಿಜಾಪುರ ತಾಲ್ಲೂಕಿನಲ್ಲಿ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಎಷ್ಟು ಫಲಾನುಭವಿಗಳಿಗೆ ಅನುಕೂಲ ಕಲ್ಪಿಸಲಾಗಿದೆ; (ಸಂಪೂರ್ಣ ವಿವರ ನೀಡುವುದು)

ಶ್ರೀ ಕೆ.ಎಂ.ಕೃಷ್ಣರೆಡ್ಡಿ (ಸಮಾಜ ಕಲ್ಯಾಣ ಸಚಿವರು):-

ಅ) 1995-96ನೇ ಸಾಲಿನಲ್ಲಿ ಬಿಜಾಪುರ ತಾಲ್ಲೂಕಿನಲ್ಲಿ 115 ಫಲಾನುಭವಿಗಳಿಗೆ ಅನುಕೂಲವಾಗುವಂತೆ 94 ಗಂಗಾ ಕಲ್ಯಾಣ ಘಟಕಗಳಿಗೆ ಕೊಳವೆ ಬಾವಿಗಳನ್ನು ಕೊರೆಯಿಸಲಾಗಿದೆ. ಪಂಪು ಅಳವಡಿಕೆ ಹಾಗೂ ಪೈಪ್‌ಲೈನ್ ಕೆಲಸ ನಡೆಯುತ್ತಿದೆ. ವಿದ್ಯುತ್ತಿನ ಅಭಾವದಿಂದ ದಿನಾಂಕ: 30-6-96ರೊಳಗಾಗಿ ಕೆಲಸ ಪೂರ್ಣಗೊಳಿಸಲು